ದಿನಾಂಕ:16-11-2016ರಂದು ಅಪರಾಹ್ನ 4.30 ಗಂಟೆಗೆ ನಿರ್ದೇಶಕರು (ಪಂ.ರಾಜ್-2) ಹಾಗೂ ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಯೋಜನೆಯಡಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ, ಆರ್.ಜಿ.ಪಿ.ಎಸ್.ಎ ಯೋಜನೆಯಡಿ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳು ಹಾಗೂ ಪ್ರಾದೇಶಿಕ ತರಬೇತಿ ಕೇಂದ್ರಗಳ ನಿರ್ಮಿಸುವ ಕುರಿತಂತೆ ಇತ್ತೀಚಿನ ಪ್ರಗತಿಯ ಕುರಿತು ನಡೆದ ಸಭಾ ನಡವಳಿಗಳು.

ಹಾಜರಿದ್ದವರು:

1. ಶ್ರೀ ಕೆ.ಯಾಲಕ್ಕಿಗೌಡ, ನಿರ್ದೇಶಕರು(ಪಂ.ರಾಜ್-2) ಹಾಗೂ ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಶ್ರೀ ಕೆಂಪೇಗೌಡ, ನಿರ್ದೇಶಕರು(ಪಂ.ರಾಜ್-1), ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ಶ್ರೀ ಪ್ರಾಣೇಶ್ವರ್ ರಾವ್, ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
4. ಶ್ರೀ ಹೆಚ್.ಪಿ.ರಂಗರಾಮನಾಯಕ, ಮುಖ್ಯ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
5. ಶ್ರೀ ಜಿ.ಎಸ್.ಷಡಕ್ಷರಪ್ಪ, ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ದಾವಣಗೆರೆ.
6. ಶ್ರೀ ಎ.ಚಿನ್ನಪ್ಪ, ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತ್, ಬಳ್ಳಾರಿ.
7. ಶ್ರೀಮತಿ ಎಸ್.ಹೆಚ್.ಪಂಡಿತ್, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ವಿಜಯಪುರ.
8. ಶ್ರೀ ಎಸ್.ಮಹಾಲಿಂಗಸ್ವಾಮಿ, ಕಛೇರಿ ವ್ಯವಸ್ಥಾಪಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
9. ಡಾ. ಜಿ.ಎಸ್.ಗಣೇಶ್ ಪ್ರಸಾದ್, ಬೋಧಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
10. ಶ್ರೀ ಎಸ್.ಜಗದೀಶ್ವರ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ನಗರ.
11. ಶ್ರೀಮತಿ ಎಂ.ಉಮಾದೇವಿ, ಸಹಾಯಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
12. ಶ್ರೀ ವಿ.ಬಾಲಮುರುಗನ್, ಎ.ಜಿ.ಎಂ.-ತಾಂತ್ರಿಕ, ಕೆಂಭಾವಿ ಆರ್ಕಿಟೆಕ್, ಬೆಂಗಳೂರು.

---

ನಿರ್ದೇಶಕರು (ಪಂ.ರಾಜ್-2)ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಬೆಂಗಳೂರಿನ ಜಕ್ಕೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡ, ಆರ್.ಜಿ.ಪಿ.ಎಸ್.ಎ ಯೋಜನೆಯಡಿ ರಾಜ್ಯದ ಎಲ್ಲಾ 30 ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಹಾಗೂ 2 ಪ್ರಾದೇಶಿಕ ತರಬೇತಿ ಕೇಂದ್ರ ಕಟ್ಟಡಗಳ ಪ್ರಗತಿ ವರದಿಯ ಕುರಿತು ಚರ್ಚಿಸಿ, ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅವಗಾಹನೆಗೆ ತರಲು ಈ ಕೆಳಕಂಡ ಅಂಶಗಳ ಬಗ್ಗೆ ನಿರ್ಣಯಿಸಲಾಯಿತು.

| ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಪ್ರಗತಿ ವಿವರ | |
|---|---|
| ವಿವರ | |
| ವಹಿಸಲಾದ ಕಾಮಗಾರಿಗಳ ಸಂಖ್ಯೆ | 30 |
| ಅನುಮೋದಿತ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)(ಪ್ರತಿ ಡಿ.ಪಿ.ಆರ್.ಸಿ ಕಟ್ಟಡಕ್ಕೆ ತಲಾ ರೂ.1.50 ಕೋಟಿಗಳು) | 4500.00 |
| ಬಿಡುಗಡೆಯಾದ ಅನುದಾನ | 3900.00 |
| ಬಾಕಿ ಬಿಡುಗಡೆಯಾಗಬೇಕಾದ ಅನುದಾನ | 600.00 |

| | |
|---|---|
| ಆರ್ಥಿಕ ಪ್ರಗತಿ | 2787.00 |
| ಪ್ರಾರಂಭಿಸಿದ ಕಾಮಗಾರಿಗಳ ಸಂಖ್ಯೆ | 24 |
| ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ (ದಾವಣಗೆರೆ, ಬಳ್ಳಾರಿ, ಚಾಮರಾಜನಗರ, ವಿಜಯಪುರ, ಮೈಸೂರು ಹಾಗೂ ಹಾವೇರಿ) | 6 |
| ನಿವೇಶನ ಸಮಸ್ಯೆ ಇರುವ ಕಾಮಗಾರಿಗಳ ಸಂಖ್ಯೆ(ಕೋಲಾರ, ಹಾಗೂ ಮಂಡ್ಯ) | 2 |
| ಪ್ರಾರಂಭಿಸಬೇಕಾಗುವ ಕಾಮಗಾರಿಗಳ ಸಂಖ್ಯೆ (ಧಾರವಾಡ) | 1 |
| ಅನುಮೋದನೆ ನಿರೀಕ್ಷಣೆಯಲ್ಲಿರುವ ಕಾಮಗಾರಿಯ ಸಂಖ್ಯೆ (ಗದಗ) | 1 |
| ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಬೇಕಾಗಿರುವ ಕಾಮಗಾರಿಗಳ ಸಂಖ್ಯೆ (ಬೆಂಗಳೂರು ಗ್ರಾಮಾಂತರ ಮತ್ತು ಕೊಪ್ಪಳ) | 2 |
| ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ | 18 |

1. ಮಂಡ್ಯ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣಕ್ಕಾಗಿ ಈಗಾಗಲೇ ಮಂಡ್ಯ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ಕಾರ್ಪೋರೇಷನ್ ಲಿ. ಹೆಬ್ಬಾಳ, ಬೆಂಗಳೂರು ಇವರಿಗೆ ಕರ್ನಾಟಕ ಕೃಷಿ ಕೈಗಾರಿಕಾ ನಿಗಮದ ಗೋದಾಮಿನ ನಿವೇಶನವನ್ನು ಜಿಲ್ಲಾ ಪಂಚಾಯತಿ ವಶಕ್ಕೆ ವರ್ಗಾಯಿಸಿಕೊಡುವಂತೆ ಅರೆ ಸರ್ಕಾರಿ ಪತ್ರವನ್ನು ಬರೆದಿರುತ್ತಾರೆ. ಅಲ್ಲದೇ ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)ಇವರ ಹೆಸರಿನಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ ಇವರಿಗೆ ಅರೆ ಸರ್ಕಾರಿ ಪತ್ರವನ್ನು ಸಹಿತ ಕಳುಹಿಸಿಕೊಡಲಾಗಿತ್ತು. ಮುಂದುವರದು, ಸದರಿ ವಿಚಾರವಾಗಿ ಕೂಡಲೇ ಕ್ರಮವಹಿಸುವಂತೆ ನೆನಪೋಲೆ ಪತ್ರವನ್ನು ಬರೆಯಲು ತಿಳಿಸಿದರು.

2. ಕೋಲಾರ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡ ನಿರ್ಮಾಣಕ್ಕಾಗಿ ಕೋಲಾರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಹಾಗೂ ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ ಇವರಿಗೆ "ಕೋಲಾರ ನಗರದ ಟೇಕಲ್ ರಸ್ತೆಯಲ್ಲಿರುವ ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ಕಾರ್ಪೋರೇಶನ್ ಕಛೇರಿಯ ವ್ಯಾಪ್ತಿಯಲ್ಲಿರುವ ಕೆ.ಎ.ಐ.ಸಿ. ಸಂಸ್ಥೆಗೆ ಸೇರಿದ ಸರ್ವೆ ನಂ.128ರಲ್ಲಿ 4.28 ಎಕರೆ ಖಾಲಿ ಜಮೀನನ್ನು ಜಂಟಿ ನಿರ್ದೇಶಕರು, ಕೃಷಿ ಇಲಾಖೆ ಇವರ ವಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆಗೆ ಹಸ್ತಾಂತರಿಸುವಂತೆ" ಪತ್ರಗಳನ್ನು ಬರೆದಿರುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಅಧೀನ ಕಾರ್ಯದರ್ಶಿ, ಭೂ-ಮಂಜೂರಾತಿ(1) ಮತ್ತು (2)ರವರಿಗೆ ಮತ್ತೊಮ್ಮೆ ಶಾಖೆಯಿಂದ ನೆನಪೋಲೆ ಪತ್ರವನ್ನು ಬರೆಯಲು ತಿಳಿಸಿದರು.

3. ಗದಗ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ರೂ.4.57 ಕೋಟಿಗಳ ವೆಚ್ಚದಲ್ಲಿ ವಿನ್ಯಾಸ ಮತ್ತು ಅಂದಾಜು ವೆಚ್ಚದಲ್ಲಿ ನಿರ್ಮಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕೆ.ಆರ್.ಐ.ಡಿ.ಎಲ್.ರವರು ನೀಡಿದ್ದು, ಪಂಚಾಯತ್ ರಾಜ್ ಮಂತ್ರಾಲಯದ ಕೇಂದ್ರ ಕಾರ್ಯಕಾರಿ ಸಮಿತಿ ಸಭೆಯಿಂದ ಅನುಮೋದನೆಗೊಂಡಂತೆ ರೂ.1.50 ಕೋಟಿಗಳ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ. ಉಳಿದ ಅನುದಾನವನ್ನು ಇತ್ತೀಚಿನ ಸಚಿವ ಸಂಪುಟದ ತೀರ್ಮಾನದಂತೆ ಮುಕ್ತಾಯಗೊಂಡ ಯೋಜನೆಗಳ ಉಳಿತಾಯ ಖಾತೆಗಳಲ್ಲಿ ಬಾಕಿಯಿದ್ದ ರೂ.8.38 ಕೋಟಿಗಳ ಅನುದಾನವನ್ನು ಖಜಾನೆ ಬ್ಯಾಂಕಿಗೆ ಜಮೆ ಮಾಡಲಾಗಿದೆ. ಸದರಿ ಅನುದಾನದಲ್ಲಿ ಗದಗ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಲು ಬಾಕಿ ನೀಡಬೇಕಾದ ಅನುದಾನ ರೂ.3.07 ಕೋಟಿ ಹಾಗೂ ಬೆಂಗಳೂರಿನ ಜಕ್ಕೂರಿನಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣಕ್ಕಾಗಿ ಈಗಾಗಲೇ ಖಜಾನೆ ಬ್ಯಾಂಕಿಗೆ ಜಮೆ ಮಾಡಲಾಗಿರುವ ಅನುದಾನದಲ್ಲಿ ಗದಗ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ಸಂಪೂರ್ಣಗೊಳಿಸಲು ನೀಡಬೇಕಾದ ಬಾಕಿ ಅನುದಾನವನ್ನು ಹೊರತುಪಡಿಸಿ, ರೂ.5.30 ಕೋಟಿಗಳನ್ನು ಭರಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅನುಮೋದನೆಗಾಗಿ ಪರಿಶೀಲಿಸಿ ಕಡತವನ್ನು ಸಲ್ಲಿಸುವಂತೆ ಸೂಚಿಸಿದರು.

4. ತದನಂತರ ಜಿಲ್ಲಾವಾರು ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳ ಯಥಾಸ್ಥಿತಿಯನ್ನು ಗಮನಿಸಲಾಗಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ಇವರು ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಈ ಕೆಳಕಂಡ ಅವಧಿಯಲ್ಲಿ ಮುಕ್ತಾಯಗೊಳಿಸಲಾಗುವುದೆಂದು ತಿಳಿಸಿದರು.

| ಕ್ರ ಸಂ | ಜಿಲ್ಲೆಯ ಹೆಸರು | ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳ ಯಥಾಸ್ಥಿತಿ ಹಾಗೂ ಮುಕ್ತಾಯಗೊಳಿಸಲಾಗುವ ಅವಧಿ |
|---|---|---|
| 1 | ಬಳ್ಳಾರಿ | ಮುಕ್ತಾಯಗೊಂಡಿರುತ್ತವೆ. |
| 2 | ವಿಜಯಪುರ | |
| 3 | ಚಾಮರಾಜನಗರ | |
| 4 | ದಾವಣಗೆರೆ | |
| 5 | ಮೈಸೂರು | |
| 6 | ಹಾವೇರಿ | |
| 7 | ಬೀದರ್ | ಡಿಸೆಂಬರ್-2016ರ ಅಂತ್ಯಕ್ಕೆ ಮುಕ್ತಾಯಗೊಳ್ಳಬಹುದಾದ ಕಾಮಗಾರಿಗಳು. |
| 8 | ಚಿಕ್ಕಮಗಳೂರು | |
| 9 | ದಕ್ಷಿಣ ಕನ್ನಡ | |
| 10 | ಯಾದಗಿರಿ | |
| 11 | ಬೆಂಗಳೂರು ನಗರ | |

5. ಮುಂದುವರೆದು, ಮುಕ್ತಾಯಗೊಂಡ 6 ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳನ್ನು ಆಯಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಸ್ತಾಂತರಿಸಲು ಅನುವಾಗುವಂತೆ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮವು ಕೂಡಲೇ ನಿಯಮಾನುಸಾರ ಕ್ರಮವಹಿಸಲು ಸೂಚಿಸಿದರು.

6. ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡಗಳಿಗೆ ಅವಶ್ಯಕವಾಗಿ ಬೇಕಾಗುವ ಪೀಠೋಪಕರಣಗಳು (ಸದರಿ ಪೀಠೋಪಕರಣಗಳು ಅತ್ಯಾಧುನಿಕ ಮಾದರಿಯ ಹಾಗೂ ಸೌಲಭ್ಯಗಳನ್ನು ಒಳಗೊಂಡಿರಬೇಕು. ಸದರಿ ಕಟ್ಟಡಗಳು ಡಿಜಿಟಲ್ ಕಾನ್ಫರೆನ್ಸ್ ಕೊಠಡಿಯನ್ನು ಒಳಗೊಳ್ಳುವಂತೆ ಸ್ಯಾಟ್‌ಕಾಮ್ ರಿಸಿವಿಂಗ್ ಸ್ಟೇಷನ್‌ನ್ನು ಸ್ಥಾಪಿಸುವುದು) ಹಾಗೂ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರ ಕಟ್ಟಡದಲ್ಲಿ ಕಾರ್ಯನಿರ್ವಹಿಸಬೇಕಾಗಿರುವ ಸಿಬ್ಬಂದಿ ವರ್ಗದವರ ಬಗ್ಗೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಇವರು ಮಾಹಿತಿಯನ್ನು ಸಿದ್ಧಪಡಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಚರ್ಚಿಸಿ, ಅವರುಗಳ ಅಭಿಪ್ರಾಯದೊಂದಿಗೆ ಅಂತಿಮ ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ತಯಾರಿಸಿ, ಈ ಬಗ್ಗೆ ಅನುದಾನವನ್ನು ಕೋರಿ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಗಿತ್ತು. ಆದರೆ ಇದುವರೆವಿಗೂ ಪ್ರಸ್ತಾವನೆಗಳು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಂದ ಸ್ವೀಕೃತವಾಗಿರುವುದಿಲ್ಲ. ಈ ಬಗ್ಗೆ ಮತ್ತೊಮ್ಮೆ ನೆನಪೋಲೆಯನ್ನು ಕಳುಹಿಸಿಕೊಡುವಂತೆ ತಿಳಿಸಿದರು.

7. ದಿನಾಂಕ:19-05-2016ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಡಿ.ಪಿ.ಆರ್.ಸಿ.ಗಳನ್ನು ನಿರ್ವಹಣೆ ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿರುವುದರ ಬಗ್ಗೆ ಕೂಡಲೇ ಸರ್ಕಾರಕ್ಕೆ ವರದಿ ಮಾಡುವಂತೆ ತಿಳಿಸಿದರು.

**ಪ್ರಾದೇಶಿಕ ತರಬೇತಿ ಕೇಂದ್ರಗಳು/ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಪ್ರಗತಿ ಪರಿಶೀಲನೆ.**

| ಪ್ರಾದೇಶಿಕ ತರಬೇತಿ ಸಂಸ್ಥೆ/ರಾಜ್ಯ ಪಂಚಾಯತಿ ಸಂಪನ್ಮೂಲ ಕೇಂದ್ರಗಳ ಪ್ರಗತಿ ವಿವರ (ರೂ.ಲಕ್ಷಗಳಲ್ಲಿ) | | | | | | | |
|---|---|---|---|---|---|---|---|
| ಕ್ರ ಸಂ | ಕಾಮಗಾರಿಯ ವಿವರ | ಅಂದಾಜು ಮೊತ್ತ | ಬಿಡುಗಡೆಯಾದ ಅನುದಾನ | ವ್ಯಯಿಸಲಾದ ಅನುದಾನ | ಲಭ್ಯವಿರುವ ಅನುದಾನ | ಬಿಡುಗಡೆಯಾಗ ಬೇಕಿರುವ ಅನುದಾನ | ಭೌತಿಕ ಪ್ರಗತಿ ವಿವರ |
| 1. | ಕಲಬುರಗಿ ಪ್ರಾದೇಶಿಕ ತರಬೇತಿ ಕೇಂದ್ರ | 705.00 | 235.00 | 300.00 | - | 470.00 | 2ನೇ ಮಹಡಿಯ ಛಾವಣಿ ಹಂತದ ಕಾಮಗಾರಿ ಪ್ರಗತಿಯಲ್ಲಿದೆ. |
| 2. | ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರ | 700.00 | 235.00 | 5.00 | - | 465.00 | ರಚನಾತ್ಮಕ ನಕ್ಷೆ ಸಿದ್ಧವಾಗಿದ್ದು, ಶೆಡ್‌ನ ನಿರ್ಮಾಣ, ತಾತ್ಕಾಲಿಕ ವಿದ್ಯುತ್ ಸಂಪರ್ಕ ಹಾಗೂ ವಸ್ತುಗಳ ಖರೀದಿಗಾಗಿ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. |

(signature)

| | | | | | | | |
|---|---|---|---|---|---|---|---|
| 3. | ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ | 4745.00 | 400.00 | 0.00 | **400.00** | 4345.00 | ಕಾಮಗಾರಿಯ ನಕ್ಷೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರಿಂದ ಅನುಮೋದನೆ ದೊರೆತಿದ್ದು, ಅಂದಾಜು ಪಟ್ಟಿಯ ಅನುಮೋದನೆ ನಿರೀಕ್ಷಣೆಯಲ್ಲಿದೆ. |

8. ಧಾರವಾಡ ಹಾಗೂ ಕಲಬುರಗಿ ಪ್ರಾದೇಶಿಕ ತರಬೇತಿ ಕೇಂದ್ರಗಳಿಗಾಗಿ 2016-17ನೇ ಸಾಲಿನ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಲೆಕ್ಕಶೀರ್ಷಿಕೆಯಡಿಯ ಕಟ್ಟಡಗಳ ನಿರ್ಮಾಣಕ್ಕಾಗಿ ನೀಡಲಾಗಿರುವ ಅನುದಾನವನ್ನು ಸೆಳೆಯಲು ಕಡತಗಳನ್ನು ಆರ್ಥಿಕ ಇಲಾಖೆಗೆ ಸಲ್ಲಿಸುವಂತೆ ತಿಳಿಸಿದರು.

9. ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡದ ನಿರ್ಮಾಣಕ್ಕಾಗಿ ಅಂದಾಜು ವೆಚ್ಚ ರೂ.47.45 ಕೋಟಿಗಳಾಗುತ್ತದೆ. ಈ ವಿಷಯವಾಗಿ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಲಾಯಿತು. ಅದರಂತೆ ಸದರಿ ಕಾಮಗಾರಿಗೆ ಕೇಂದ್ರ ಸರ್ಕಾರದಿಂದ ಕಡಿಮೆ ಪ್ರಮಾಣದ ಅನುದಾನವು ಲಭ್ಯವಾಗುವ ಸಾಧ್ಯತೆಯಿದ್ದು, ರಾಜ್ಯ ಸರ್ಕಾರವೇ ಉಳಿದ ಸಂಪೂರ್ಣ ಅನುದಾನವನ್ನು ಭರಿಸಬೇಕಾಗಬಹುದು. ಈ ಹಿಂದಿನ ಆರ್ಥಿಕ ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಭವನದ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರವು ಆಯವ್ಯಯದಲ್ಲಿ ಪ್ರತ್ಯೇಕ ಅನುದಾನವನ್ನು ನಿಗಧಿಪಡಿಸಿ, ಭವನವನ್ನು ನಿರ್ಮಾಣ ಮಾಡಲಾಗಿದೆ. ಅದರಂತೆ, ಮುಂದಿನ 3 ಆರ್ಥಿಕ ವರ್ಷದಲ್ಲಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರದ ನಿರ್ಮಾಣಕ್ಕಾಗಿ ಸದರಿ ಲೆಕ್ಕ ಶೀರ್ಷಿಕೆಯಡಿಯಲ್ಲಿ ಪ್ರತಿ ವರ್ಷ ರೂ.14.00 ಕೋಟಿಗಳಷ್ಟು ಅನುದಾನವನ್ನು ಮೀಸಲಿಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ ಇವರಿಗೆ ಅನಧಿಕೃತ ಟಿಪ್ಪಣಿಗಳನ್ನು ಕಳುಹಿಸಿಕೊಡಲು ತೀರ್ಮಾನಿಸಲಾಯಿತು.

ಅಂತಿಮವಾಗಿ ನಿರ್ದೇಶಕರು(ಪಂ.ರಾಜ್-2)ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ವಂದಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

22/11/16

(ಕೆ.ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್-2)ಹಾಗೂ
ಸರ್ಕಾರದ ಪದನಿಮಿತ್ತ ಜಂಟಿಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು ಮುಂದಿನ ಸೂಕ್ತ ಕ್ರಮಕ್ಕಾಗಿ ಹಾಗೂ ಸದರಿ ನಡವಳಿಗಳಿಗೆ ಸಂಬಂಧಿಸಿದಂತೆ ಅನುಪಾಲನಾ ವರದಿಯನ್ನು ಸಲ್ಲಿಸುವ ಕುರಿತು.
2. ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಹಾಗೂ ಸದರಿ ನಡವಳಿಗಳಿಗೆ ಸಂಬಂಧಿಸಿದಂತೆ ಅನುಪಾಲನಾ ವರದಿಯನ್ನು ಸಲ್ಲಿಸುವ ಕುರಿತು.
5. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
2. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
3. ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.